**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/36/ಪ್ರವೇಶಾತಿ ಮಾರ್ಗಸೂಚಿ/2022-23    ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ : 02.07.2022.

## ಸುತ್ತೋಲೆ

**ವಿಷಯ** : 2022-23ನೇ ಸಾಲಿನಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ UUCMS ತಂತ್ರಾಂಶದಲ್ಲಿ ನೊಂದಾಯಿಸುವ ವಿದ್ಯಾರ್ಥಿಗಳಿಗೆ ಕಾಲೇಜಿನ ಹಂತದಲ್ಲಿ ಮಾರ್ಗದರ್ಶನ ನೀಡುವ ಬಗ್ಗೆ.

**ಉಲ್ಲೇಖ** : ಇದೇ ಕ್ರಮಾಂಕದ ಸುತ್ತೋಲೆಯ ದಿನಾಂಕ : 18.06.2022 ಹಾಗೂ 28.06.2022.

******

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ UUCMS ತಂತ್ರಾಂಶದಲ್ಲಿ ಆನ್‌ಲೈನ್ ಮುಖಾಂತರ ಪ್ರವೇಶಾತಿಯನ್ನು ಪ್ರಾರಂಭಿಸುವಂತೆ ಈಗಾಗಲೇ ಮಾರ್ಗದರ್ಶನ ನೀಡಲಾಗಿದೆ. ಪ್ರಾಂಶುಪಾಲರು ಕಾಲೇಜುಗಳ ಹಂತದಲ್ಲಿ ಪ್ರವೇಶಾತಿ ಸಮಿತಿಯನ್ನು ರಚಿಸಿಕೊಂಡು ಅಗತ್ಯವಿರುವ helpdesk ಅನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಬಗ್ಗೆ ಮಾರ್ಗದರ್ಶನ ಹಾಗೂ ಅಗತ್ಯ ನೆರವು ನೀಡಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕಾಲೇಜಿನ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂಧಿಗಳು ಪ್ರವೇಶಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸಕ್ರೀಯವಾಗಿ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಮುಂದುವರೆದು, ಈ ನಿಟ್ಟಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕೆಳಕಂಡಂತೆ ವಿದ್ಯಾರ್ಥಿಗಳ ಪ್ರವೇಶಾತಿ ಬಗ್ಗೆ ಸೂಕ್ತ ಕ್ರಮವಹಿಸಬೇಕಾಗಿರುತ್ತದೆ.

1. ವಿದ್ಯಾರ್ಥಿಗಳಿಗೆ ಪ್ರವೇಶಾತಿ ಬಗ್ಗೆ ಮಾಹಿತಿಯನ್ನು ತಲುಪಿಸಲು ಹೆಚ್ಚಿನ ಕ್ರಮವಹಿಸುವುದು.
2. ವಿದ್ಯಾರ್ಥಿಗಳಿಗೆ UUCMS ಮುಖಾಂತರ ಪ್ರವೇಶಾತಿ ಹೊಂದಲು ಮಾರ್ಗದರ್ಶನ ನೀಡುವ ಬಗ್ಗೆ ಕಾಲೇಜಿನ ಪ್ರವೇಶ ದ್ವಾರ, ಸೂಚನಾ ಫಲಕ ಹಾಗೂ ಕಾಲೇಜಿನ ಪ್ರಮುಖ ಸ್ಥಳಗಳಲ್ಲಿ ಚಿತ್ತಿ ಪತ್ರ ರೂಪದಲ್ಲಿ / ದಪ್ಪ ಅಕ್ಷರಗಳಲ್ಲಿ ಸವಿವರವಾದ (step by step procedure) ಮಾಹಿತಿಯನ್ನು ಪ್ರಕಟಿಸುವುದು. ಇದರಿಂದಾಗಿ UUCMS ಪ್ರಕ್ರಿಯೆಯ ಬಗ್ಗೆ ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ಸ್ಪಷ್ಟತೆ ಇರುತ್ತದೆ.
3. ವಿದ್ಯಾರ್ಥಿಗಳು ಪ್ರವೇಶಾತಿ ಅರ್ಜಿಯನ್ನು ಸಲ್ಲಿಸಲು ಅನುಕೂಲವಾಗುವಂತೆ ಕಾಲೇಜಿನಲ್ಲಿರುವ ಕಂಪ್ಯೂಟರ್ ಲ್ಯಾಬ್/ ಕಂಪ್ಯೂಟರ್‌ಗಳನ್ನು ಬಳಸುವುದು ಹಾಗೂ ಕಾಲೇಜಿನ ಸಿಬ್ಬಂಧಿ ವತಿಯಿಂದ ತಾಂತ್ರಿಕ ನೆರವು ನೀಡಲು ಅಗತ್ಯ ಕ್ರಮವಹಿಸುವುದು.
4. ಕೋರ್ಸ್‌ವಾರು ಶುಲ್ಕಗಳ ಮಾಹಿತಿಯನ್ನು ದಪ್ಪ ಅಕ್ಷರಗಳಲ್ಲಿ ವಿದ್ಯಾರ್ಥಿಗಳಿಗೆ ಸ್ಪಷ್ಟವಾಗಿ ಕಾಣುವಂತೆ ಸೂಚನಾಫಲಕ ಹಾಗೂ ಕಾಲೇಜಿನ ಇನ್ನಿತರೆ ಸ್ಥಳಗಳಲ್ಲಿ ಪ್ರಕಟಿಸುವುದು.
5. ಸರ್ಕಾರಿ ಪದವಿ ಕಾಲೇಜುಗಳು ಸಂಬಂಧಿಸಿದ ವಿಶ್ವವಿದ್ಯಾಲಯಗಳೊಂದಿಗೆ ಹಾಗೂ UUCMS ತಾಂತ್ರಿಕ ತಂಡದೊಂದಿಗೆ ಸಮನ್ವಯತೆ ಸಾಧಿಸುವುದು.
6. UUCMS ನಲ್ಲಿ upload ಮಾಡಬೇಕಾದ ಸಂದರ್ಭದಲ್ಲಿ ಯಾವುದೇ ಸಮಸ್ಯೆಗಳಿದ್ದರು ಬಗೆಹರಿಸಿಕೊಂಡು ವಿದ್ಯಾರ್ಥಿಗಳ ಪ್ರವೇಶಾತಿ ಪ್ರಕ್ರಿಯೆಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸುವುದು.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು :

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ –ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
3. ಕಛೇರಿ ಪ್ರತಿ.